ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 1974 (2377)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಬೀದರ್ ಜಿಲ್ಲೆಯಲ್ಲಿ ಗಿರಿಜನ ಉಪಯೋಜನೆಗಳ ಕುರಿತು

(ಅ) ನಾಡಿನ ವಿವಿಧ ಭಾಗಗಳಲ್ಲಿ ವಾಸಿಸುತ್ತಿರುವ ಗಿರಿಜನ ಸಮುದಾಯವನ್ನು ವಿಶೇಷವಾಗಿ ಸಮಾಜದ ಮುಖ್ಯವಾಹಿನಿಗೆ ಕರೆತರುವ ಸದುದ್ದೇಶದಿಂದ ಸರ್ಕಾರವು ಗಿರಿಜನ ಉಪಯೋಜನೆಯಡಿಯಲ್ಲಿ ವಿಶೇಷ ನಿಧಿಯನ್ನು ಸ್ಥಾಪಿಸಿ, ಪ್ರತ್ಯೇಕವಾಗಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಪರಿಶಿಷ್ಟ ಪಂಗಡದ (ಎಸ್.ಟಿ) ಕಲಾವಿದರು ಮತ್ತು ಸಂಸ್ಥೆಗಳು ಪ್ರತಿಭಾ ಪ್ರದರ್ಶನಕ್ಕೆ ಅವಕಾಶಗಳನ್ನು ಮತ್ತು ಆರ್ಥಿಕ ನೆರವನ್ನು ಒದಗಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಜನಪದ ತರಬೇತಿ ಕಾರ್ಯಕ್ರಮಗಳಿಗೆ ಗುರು-ಶಿಷ್ಯ ಪರಂಪರೆಯ ಅಡಿಯಲ್ಲಿ ಗುರುಕುಲ ಮಾದರಿಯ ಶಿಕ್ಷಣಕ್ಕೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಇದ್ದಲ್ಲಿ, ವಿವರ ನೀಡುವುದು ;

(ಈ) ಕಳೆದ 5 ವರ್ಷಗಳಿಂದ ಕಲಾವಿದರಿಗೆ ವಾರ್ಷಿಕ ವೇತನ ನೀಡಲಾಗುತ್ತಿದೆಯೇ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)